ಕರ್ನಾಟಕ ಸರಕಾರ
ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ ಕಾರ್ಯಾಲಯ ಜಿಲ್ಲಾ ಆಡಳಿತ ಭವನ, 1ನೇ ಮಹಡಿ, ಹೊಸಪೇಟೆ ರೋಡ್, ಕೊಪ್ಪಳ-583231
ದೂರವಾಣಿ ಸಂಖ್ಯೆ:08539-222703 E-mail:ddwcdkpl@gmail.com

ಸಂ:ಉನಿಕೊ/ಮಮಅಇ/ಅಂಕಾಕ/ಅಂಸ/ಆಯ್ಕೆ/2019-20 ದಿನಾಂಕ:29.06.2019

-:ಅಧಿಸೂಚನೆ:-

ಕೊಪ್ಪಳ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 05 ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 22 ಅಂಗನವಾಡಿ ಕಾರ್ಯಕರ್ತೆ ಮತ್ತು 85 ಅಂಗನವಾಡಿ ಸಹಾಯಕಿಯ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಸಂಬಂಧ ಹೆಚ್ಚಿನ ವಿವರಗಳಿಗಾಗಿ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ | 01.07.2019 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 31.07.2019 |
| ವೆಬ್ ಸೈಟ್ ವಿಳಾಸ | www.anganwadirecruit.kar.nic.in |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಕೊಪ್ಪಳ.

ಕರ್ನಾಟಕ ಸರಕಾರ
ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ ಕಾರ್ಯಾಲಯ ಜಿಲ್ಲಾ
ಆಡಳಿತ ಭವನ, 1ನೇ ಮಹಡಿ, ಹೊಸಪೇಟೆ ರೋಡ್, ಕೊಪ್ಪಳ-583231
ದೂರವಾಣಿ ಸಂಖ್ಯೆ:08539-222703 E-mail:ddwcdkpl@gmail.com

ಸಂ:ಉನಿಕೊ/ಮಮಅಇ/ಅಂಕಾಕ/ಅಂಸ/ಆಯ್ಕೆ/2019-20 ದಿನಾಂಕ:29.06.2019

## -:Calendar of Events:-

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೇಯನ್ನು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.

| ವೆಬ್ ಸೈಟ್ ವಿಳಾಸ | www.anganwadirecruit.kar.nic.in |
|---|---|

| ದಿನಾಂಕ | ದಿನ | ವಿವರ | ಷರಾ |
|---|---|---|---|
| 01.07.2019 | – | ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | |
| 31.7.2019 | 30ದಿನ | ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | |
| 01.08.2019 ರಿಂದ 07.08.2019 | 07 ದಿನ | ಆಯ್ಕೆ ಸಮಿತಿ ಸದಸ್ಯರು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಸ್ವೀಕರಿಸಲಾದ ಅರ್ಜಿಗಳ ಪರಿಶೀಲನೆ | |
| 08.08.2019 ರಿಂದ 11.08.2019 | 04 ದಿನ | ಅರ್ಹರಾದ ಅಭ್ಯರ್ಥಿಗಳ ತಾತ್ಕಲಿಕ ಆಯ್ಕೆ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು. | |
| 12.08.2019 ರಿಂದ 20.08.2019 | 09ದಿನ | ಅಭ್ಯರ್ಥಿಗಳಿಂದ ಆಕ್ಷೇಪಣೆ ಸಲ್ಲಿಸುವಿಕೆಗೆ ಕಾಲಾವಕಾಶ | |
| 22.08.2019 ರಿಂದ 27.08.2019 | 07ದಿನ | ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ. | |
| 29.08.2019 ರಿಂದ 31.08.2019 | 3ದಿನ | ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು. | |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಕೊಪ್ಪಳ.

## *Help Desk*

## ***Contact for required details***

| SL.No | Taluks | Phone No |
|---|---|---|
| 01 | DD office Koppal | 08539-222703 |
| 02 | CDPO office Koppal | 08539-230205 |
| 03 | Yelburga | 08534-220393 |

**Deputy Director**
**Women and Child Development Department**
**Koppal**

ಕರ್ನಾಟಕ ಸರಕಾರ

**ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ ಕಾರ್ಯಾಲಯ ಜಿಲ್ಲಾ ಆಡಳಿತ ಭವನ, 1ನೇ ಮಹಡಿ, ಹೊಸಪೇಟೆ ರೋಡ್, ಕೊಪ್ಪಳ-583231**

**ದೂರವಾಣಿ ಸಂಖ್ಯೆ:08539-222703 E-mail:ddwcdkpl@gmail.com**

---

**ಸಂ:ಉನಿಕೊ/ಮಮಅಇ/ಅಂಕಾಕ/ಅಂಸ/ಆಯ್ಕೆ/2019-20** **ದಿನಾಂಕ:29.06.2019**

**ವಿಷಯ:** ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.

**ಉಲ್ಲೇಖ:** 1)ಸರ್ಕಾರಿ ಆದೇಶ ಸಂ:ಮಮಇ/303/ಐಸಿಡಿ/2017-18/ಬೆಂಗಳೂರು. ದಿನಾಂಕ:23.09.2017 ಮತ್ತು ಸೇರ್ಪಡೆ ಆದೇಶ ದಿನಾಂಕ:**01.12.2017** ಹಾಗೂ ತಿದ್ದುಪಡಿ ಆದೇಶ ದಿನಾಂಕ:19.01.2019

2)ಮಾನ್ಯ ಜಿಲ್ಲಾಧಿಕಾರಿಗಳು, ಕೊಪ್ಪಳ ಇವರ ಅನುಮೋದನೆ ಕಂಡಿಕೆ ಸಂಖ್ಯೆ-16.

ಕೊಪ್ಪಳ ಜಿಲ್ಲೆಯ 05 ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವ ಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮೀಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ (ಅದೇ ಗ್ರಾಮದ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷ ವಯೋಮಿತಿ ಸಡಿಲಿಕೆ ನೀಡಿದೆ.
ಅಂಗನವಾಡಿ ಕಾರ್ಯಕರ್ತೆಯಾಗಲು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿಯಾಗಲು ಕನಿಷ್ಠ 4 ನೇ ತರಗತಿ ತೇರ್ಗಡೆಯಾಗಿದ್ದು, ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆಯಾಗಿರಬೇಕು. ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಸಂಬಂಧಿತರು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:31.07.2019 ರ ಅಪರಾಹ್ನ 5:30 ಗಂಟೆಯೊಳಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ.

## -:<u>ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು</u>:-

1. ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ(ಆನ್‌ಲೈನ್).
2. ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ.
3. ತಹಶಿಲ್ದಾರರು/ಉಪತಹಶಿಲ್ದಾರರಿಂದ ಪಡೆದ ಒಂದು ವರ್ಷದೊಳಗಿನ ವಾಸಸ್ಥಳ ದೃಡಿಕರಣ ಪತ್ರ.
4. ವಿಧ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಕಾರ್ಯಕರ್ತೆ ಹುದ್ದೆಗೆ 10ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು 10ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು.)
5. ವಿಧ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಸಹಾಯಕಿ ಹುದ್ದೆಗೆ 9ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು 9ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು.)
6. ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
7. ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಡಿಕರಣವನ್ನು ಪರಿಗಣಿಸುವುದಿಲ್ಲ.)
8. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪ ವಿಭಾಗಾಧಿಕಾಗಳಿಂದ ಪಡೆದ ಪ್ರಮಾಣ ಪತ್ರ.

9. ಅಂಗವಿಕಲತೆ ಪ್ರಮಾಣ ಪತ್ರ (ದೈಹಿಕ ಅಂಗವಿಕಲತೆ ಶೇ.60ಕಿಂತ ಕಡಿಮೆ ಇದ್ದಲ್ಲಿ ಮಾತ್ರ) (ಅಂಗನವಾಡಿ ಕಾರ್ಯಕರ್ತೆ ಹುದ್ದಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ.)(ಅಂಗವಿಕಲರ ವೇತನದ ದೃಡಿಕರಣವನ್ನು ಪರಿಗಣಿಸುವುದಿಲ್ಲ.)
10. ವಿಚ್ಚೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
11. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನೆಡೆಯಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಗಳು ಎಂಬುವುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ .
12. ಪರಿತ್ಯೆಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತಿಯಿಂದ ಪಡೆದ ಪ್ರಮಾಣ ಪತ್ರ.
13. ಇಲಾಖೆಯ ಸುಧಾರಣ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
14. ಯೋಜನಾ ನಿರಾಶ್ರಿತರೆಂಬ ತಹಶಿಲ್ದಾರರಿಂದ ಪಡೆದ ಪ್ರಮಾಣ ಪತ್ರ.
15. ಸ್ಥಳೀಯ ಸಂಸ್ಥೆಗಳ ಜನ ಪ್ರತಿನಿದಿಗಳಾಗಿದ್ದಲ್ಲಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಿರುತ್ತದೆ.

**ಉಪನಿರ್ದೇಶಕರು**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,**
**ಕೊಪ್ಪಳ.**